ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

---

ಸಂಖ್ಯೆ : ವಾಇ : ಜಂ ನಿ : ಸುಮಪ : 2021–22 ದಿನಾಂಕ : 25–09–2021

# ಮಾಧ್ಯಮ ಆಹ್ವಾನ
# Media Invitation

**1 ಗೋವಿಂದರಾಜನಗರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ನಾಯಂಡಹಳ್ಳಿ ಕೆರೆ ಮತ್ತು ನಿರ್ಮಾಣ ಹಂತದಲ್ಲಿರುವ ಸರ್ಕಾರಿ ಆಸ್ಪತ್ರೆ ಕಟ್ಟಡದ ಕಾಮಗಾರಿ ಸ್ಥಳ ಪರಿವಿಕ್ಷಣೆ :**

**ಸ್ಥಳ ಪರಿವಿಕ್ಷಣೆ :**
**ವಿ.ಸೋಮಣ್ಣ**
ಮಾನ್ಯ ವಸತಿ ಮತ್ತು ಮೂಲಸೌಲಭ್ಯ ಅಭಿವೃದ್ಧಿ ಸಚಿವರು, ಕರ್ನಾಟಕ ಸರ್ಕಾರ.

ದಿನಾಂಕ: 26–09–2021, ಭಾನುವಾರ
ಸಮಯ: ಬೆಳಿಗ್ಗೆ 9.00 ಗಂಟೆಗೆ
ಸ್ಥಳ: ಗೋವಿಂದರಾಜನಗರ ವಿಧಾನಸಬಾ ಕ್ಷೇತ್ರ ವ್ಯಾಪ್ತಿಯ ನಾಯಂಡಹಳ್ಳಿ, ಬೆಂಗಳೂರು.

**2. ವಸತಿ ಇಲಾಖೆ ಕರ್ನಾಟಕ ಗೃಹ ಮಂಡಳಿ ವತಿಯಿಂದ ಸೂರ್ಯನಗರ 1ನೇ ಹಂತದಲ್ಲಿ ನಿರ್ಮಿಸಲಾಗಿರುವ "ಸೂರ್ಯ ಎಲಿಗೆನ್ಸ್" ಬಹುಮಹಡಿ ವಸತಿ ಸಮುಚ್ಚಯದ ಉದ್ಘಾಟನಾ ಸಮಾರಂಭ:**

**ವಸತಿ ಸಮುಚ್ಚಯದ ಉದ್ಘಾಟನೆ:**
ಬಸವರಾಜ ಎಸ್ ಬೊಮ್ಮಾಯಿ
ಸನ್ಮಾನ್ಯ ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ.

ಸಾಂಕೇತಿಕ ಹಂಚಿಕೆ ಪತ್ರಗಳ ವಿತರಣೆ:
ವಿ.ಸೋಮಣ್ಣ
ಮಾನ್ಯ ವಸತಿ ಮತ್ತು ಮೂಲ ಸೌಲಭ್ಯ ಅಭಿವೃದ್ಧಿ ಸಚಿವರು, ಕರ್ನಾಟಕ ಸರ್ಕಾರ.

ಘನ ಉಪಸ್ಥಿತಿ:
ಎ.ನಾರಾಯಣಸ್ವಾಮಿ

**ಮಾನ್ಯ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಖಾತೆ ರಾಜ್ಯ ಸಚಿವರು, ಭಾರತ ಸರ್ಕಾರ.**

**ಅಧ್ಯಕ್ಷತೆ:**
**ಬಿ.ಶಿವಣ್ಣ**
**ಮಾನ್ಯ ಶಾಸಕರು, ಆನೇಕಲ್ ವಿಧಾನಸಭಾ ಕ್ಷೇತ್ರ.**

**ದಿನಾಂಕ: 26–09–2021, ಭಾನುವಾರ**
**ಸಮಯ: ಬೆಳಿಗ್ಗೆ 11.00 ಗಂಟೆಗೆ**
**ಸ್ಥಳ: 'ಸೂರ್ಯ ಎಲಿಗೆನ್ಸ್' ಆವರಣ, ಸೂರ್ಯನಗರ 1ನೇ ಹಂತ, ಆನೇಕಲ್ ಮುಖ್ಯ ರಸ್ತೆ, ಚಂದಾಪುರ, ಆನೇಕಲ್ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ.**

**ವಿಶೇಷ ಸೂಚನೆ: ಈ ಕಾರ್ಯಕ್ರಮಕ್ಕೆ ವಾಹನ ವ್ಯವಸ್ಥೆ ಕಲ್ಪಿಸಲಾಗಿದ್ದು, ವಾಹನವು ಕಬ್ಬನ್ ಪಾರ್ಕ್‌ನಲ್ಲಿರುವ ಪ್ರೆಸ್‌ಕ್ಲಬ್‌ನಿಂದ ಹೊರಡುತ್ತದೆ. ಹೊರಡುವ ಸಮಯ: 8.30,**
**ಸಂಪರ್ಕಿಸಿ: ರವಿ – 9448266499, ವಿರೂಪಾಕ್ಷ – 9686373991**

## 3. ವಿಶ್ವ ಪ್ರವಾಸೋದ್ಯಮ ದಿನಾಚರಣೆ:

**ಬಸವರಾಜ ಎಸ್ ಬೊಮ್ಮಾಯಿ**
**ಸನ್ಮಾನ್ಯ ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ.**

**ದಿನಾಂಕ: 27–09–2021, ಸೋಮವಾರ**
**ಸಮಯ: ಬೆಳಿಗ್ಗೆ 11.00 ಗಂಟೆಗೆ**
**ಸ್ಥಳ: ಕೊಠಡಿ ಸಂಖ್ಯೆ: 334, ವಿಧಾನಸೌಧ ಸಭಾಂಗಣ, ಬೆಂಗಳೂರು.**

# ಪತ್ರಿಕಾ ಪ್ರಕಟಣೆ

## PRESS RELEASE

### ಪ್ರಜಾಪ್ರಭುತ್ವವನ್ನು ಬಲಪಡಿಸುವಲ್ಲಿ ಚುನಾಯಿತ ಪ್ರತಿನಿಧಿಗಳ ಪಾತ್ರ ಪ್ರಮುಖ – ಲೋಕಸಭಾ ಸಭಾಧ್ಯಕ್ಷ ಓಂ ಬಿರ್ಲಾ

ಬೆಂಗಳೂರು, ಸೆಪ್ಟೆಂಬರ್ 25, (ಕರ್ನಾಟಕ ವಾರ್ತೆ)

ದೇಶದ ಸ್ವಾತಂತ್ರ್ಯೋತ್ಸವದ 75 ವರ್ಷಗಳ ಸುದೀರ್ಘ ಪಯಣದಲ್ಲಿ ಪ್ರಜಾಪ್ರಭುತ್ವದ ಉಳಿವಿಗಾಗಿ ಹಾಗೂ ಬಲಪಡಿಸಲು ಜನಪ್ರತಿನಿಧಿಗಳ ಪಾತ್ರ ಬಹಳ ಪ್ರಮುಖವಾದದ್ದು ಎಂದು ಲೋಕಸಭೆಯ ಸಭಾಧ್ಯಕ್ಷ ಓಂ ಬಿರ್ಲಾ ಅವರು ತಿಳಿಸಿದರು.

ಇಂದು ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಮಾಧ್ಯಮ ಪ್ರತಿನಿಧಿಗಳನ್ನು ಉದ್ದೇಶಿಸಿ ಮಾತನಾಡಿದ ಲೋಕಸಭಾ ಸಭಾಧ್ಯಕ್ಷರು, 75 ವರ್ಷಗಳ ಪ್ರಜಾಪ್ರಭುತ್ವ ಪ್ರಯಣದ ಸ್ಮರಣೆಗಾಗಿ ನಾವು 75 ಕಾರ್ಯಕ್ರಮಗಳನ್ನು ದೇಶಾದ್ಯಂತ ಸಂಘಟಿಸಲು ರಾಷ್ಟ್ರಪಟ್ಟದ ಪೀಠಾಧಿಪತಿಗಳ ಸಂಘದಿಂದ ಯೋಜನೆ ಹಾಕಿಕೊಂಡಿದ್ದೇವೆ. ಈ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿರುವುದರಿಂದ ಪಂಚಾಯತಿಯಿಂದ

ಸಂಸತ್ತಿನವರೆಗೆ ಎಲ್ಲಾ ಪ್ರಜಾಪ್ರಭುತ್ವದ ಸಂಸ್ಥೆಗಳನ್ನು ಹೆಚ್ಚು ಜವಾಬ್ದಾರಿಯುತವಾಗಿ ಕಾರ್ಯನಿರ್ವಹಿಸಲು ಅನುಕೂಲವಾಗುವುದರ ಜೊತೆಗೆ ಮತ್ತಷ್ಟು ಬಲವರ್ಧನೆಗೊಳ್ಳುವುದು.

ಪ್ರಜಾಪ್ರಭುತದ ಶಾಸಕಾಂಗ ಉತ್ತಮ ಶಾಸನಗಳನ್ನು ರೂಪಿಸುವುದರ ಮೂಲಕ ಕಾರ್ಯಾಂಗದ ಮೇಲೆ ಪರಿಣಾಮಕಾರಿ ನಿಗಾ ಇಡಬೇಕು ಮತ್ತು ಜನರ ನಿರೀಕ್ಷೆಗೆ ತಕ್ಕಂತೆ ಶಾಸನಗಳನ್ನು ನೀಡಬೇಕು ಹಾಗೂ ಅವುಗಳು ಸಾರ್ವಜನಿಕರ ವಿಶ್ವಾಸಗಳಿಸುವುದರೊಂದಿಗೆ ಸಮರ್ಪಕವಾಗಿ ಕಾರ್ಯ ನಿರ್ವಹಿಸಬೇಕು ಎಂದು ಹೇಳಿದರು.

ನಾವು ಪ್ರಜಾಪ್ರಭುತ್ವದಲ್ಲಿ ದೇಶದ ಮಹಿಳೆಯರು ಮತ್ತು ಯುವಜನರ ಸಕ್ರಿಯ ಭಾಗವಹಿಸುವಿಕೆಯನ್ನು ಖಚಿತಪಡಿಸಿಕೊಳ್ಳಲು ಪ್ರಯತ್ನಿಸುತ್ತಿದೇವೆ. ಈ ನಿಟ್ಟಿನಲ್ಲಿ ನಾವು ರಾಷ್ಟ್ರಮಟ್ಟದಲ್ಲಿ ಯುವ ಸಂಸತ್ತು, ಯುವ ಪ್ರತಿನಿಧಿಗಳಿಗೆ ತರಬೇತಿ ಮತ್ತು ಸಾಮರ್ಥ್ಯ ನಿರ್ಮಾಣ ಮಾಡಬೇಕಾಗಿದೆ ಎಂದು ತಿಳಿಸಿದರು.

ಜನಪ್ರತಿನಿಧಿಗಳು ಜನರಿಂದ ಚುನಾಯಿತರಾದ್ದರಿಂದ ದೇಶದ ಎಲ್ಲಾ ಪ್ರಜಾಪ್ರಭುತ್ವ ಸಂಸ್ಥೆಗಳ ಸುಗಮ ಮತ್ತು ಸುವ್ಯವಸ್ಥಿತ ಕಾರ್ಯ ನಿರ್ವಹಣೆಯನ್ನು ನಾವು ಅಪೇಕ್ಷಿಸುತ್ತೇವೆ. ಅದರಲ್ಲಿ ಸಮಗ್ರ ಚರ್ಚೆ ಹಾಗೂ ಸಾರ್ವಜನಿಕರಿಗೆ ಸಂಬಂಧಿಸಿದ ವಿಷಯಗಳ ಬಗ್ಗೆ ಚಿಂತನೆ ಮಾತ್ರ ಇದ್ದಾಗ ಸಾರ್ವಜನಿಕರ ಆಶೋತ್ತರಗಳನ್ನು ಕುರಿತು ಚರ್ಚಿಸಿ ಈಡೇರಿಸಬಹುದಾಗಿದೆ ಎಂದರು.

ಇದೇ ವರ್ಷ ಸಾರ್ವಜನಿಕ ಲೆಕ್ಕಪತ್ರ ಸಮಿತಿಗೆ 100ವರ್ಷಗಳು ಪೂರ್ಣಗೊಳ್ಳಲಿದ್ದು, ಈ ಸುಸಂದರ್ಭದಲ್ಲಿ ಶತಮಾನೋತ್ಸವ ಆಚರಣೆಯನ್ನು ಇದೇ ವರ್ಷ ಡಿಸೆಂಬರ್ 4 ಮತ್ತು 5ರಂದು ಆಯೋಜಿಸಲಾಗುವುದು. ಈ ಆಚರಣೆಯಲ್ಲಿ ನಮ್ಮ ದೇಶದ ಸಾರ್ವಜನಿಕ ಪ್ರತಿನಿಧಿಗಳನ್ನು ಹಾಗೂ ಇತರ ಪ್ರಜಾಪ್ರಭುತ್ವ ರಾಷ್ಟ್ರಗಳ ಪ್ರತಿನಿಧಿಗಳನ್ನು ಆಹ್ವಾನಿಸಲಾಗುವುದು.

ಸಂಸತ್ತಿನಲ್ಲಿರುವ ಗ್ರಂಥಾಲಯವು ಈ ದೇಶದ ಜ್ಞಾನದ ಖನಿಜವಾಗಿದ್ದು, ಈ ವರ್ಷ 100 ವರ್ಷಗಳನ್ನು ಪೂರೈಸಲಿದೆ. ಸಂಸತ್ತಿನ ಗ್ರಂಥಾಲಯವು ಹೆಚ್ಚಿನ ಸಂಖ್ಯೆಯ ಅಪರೂಪದ ಪುಸ್ತಕಗಳು ಮತ್ತು ದಾಖಲೆಗಳು ಸಮೃದ್ಧ ಮತ್ತು ಜ್ಞಾನ ಮತ್ತು ಮಾಹಿತಿಯ ಮೂಲವಾಗಿದೆ. ನಾವು ಈ ಗ್ರಂಥಾಲಯವನ್ನು ಡಿಜಿಟಲೀಕರಣಗೊಳಿಸುವ ಪ್ರಕ್ರಿಯೆಯಲ್ಲಿದ್ದೇವೆ. ಸಂಪೂರ್ಣ ಡೇಟಾ, ಮೆಟಾಡೇಟಾ ಮೂಲಕ ಲಭ್ಯವಿರುತ್ತದೆ. ಅದರಲ್ಲಿ ಯಾವುದೇ ಪುಸ್ತಕವನ್ನು, ವ್ಯಕ್ತಿಯ ಹೆಸರುನ್ನು ಬಳಸಿ ಅಥವಾ ವಿಷಯದ ಆಧಾರದ ಮೇಲೆ ಡಿಜಿಟಲ್‌ನಲ್ಲಿ ಕ್ಷಣ ಮಾತ್ರದಲ್ಲಿ ಹುಡುಕಬಹುದು. ರಾಜ್ಯಗಳಿಗೆ ಗ್ರಂಥಾಲಯಗಳ ಡಿಜಿಟಲೀಕರಣ ಮಾಡಲು ಅಗತ್ಯ ತಾಂತ್ರಿಕ ನೆರವನ್ನು ಒದಗಿಸಲಾಗುತ್ತದೆ.

ಇದೇ ಸೆಪ್ಟೆಂಬರ್ 15 ರಂದು ಎಲ್ಲಾ ರಾಜ್ಯಗಳ ಅಧ್ಯಕ್ಷರುಗಳ ಸಮ್ಮೇಳನವು 100 ವರ್ಷಗಳನ್ನು ಪೂರೈಸಿದೆ, ಅದೇ ದಿನ ನಾವು ಅಂತರರಾಷ್ಟ್ರೀಯ ಪ್ರಜಾಪ್ರಭುತ್ವದ ದಿನವನ್ನು ಕೂಡಾ ಆಚರಿಸಿದ್ದೇವೆ. ಪ್ರಜಾಪ್ರಭುತ್ವದ ಮನೋಭಾವಕ್ಕೆ ಸರಿಯಾದ ಅಭಿವ್ಯಕ್ತಿ ನೀಡುವ ಸಲುವಾಗಿ ಅದೇ ದಿನ “ಅಜಾದಿ ಕ ಅಮೃತ ಮಹೋತ್ಸವದ” ಅಡಿಯಲ್ಲಿ ಪಾರ್ಲಿಮೆಂಟ್ ಟಿವಿಯನ್ನು ಸಹ ಆರಂಭಿಸಲಾಯಿತು.

ಅಧ್ಯಕ್ಷರುಗಳ ಸಮ್ಮೇಳನದ ಶತಮಾನೋತ್ಸವ ಆಚರಣೆ ಮತ್ತು ದೇಶದ ಸ್ವಾತಂತ್ರ್ಯದ 75ನೇ ವಾರ್ಷಿಕೋತ್ಸವವನ್ನು ನಾವು ಆಚರಿಸುತ್ತಿರುವಾಗ, ನಮ್ಮ ಶಾಸಕಾಂಗದಲ್ಲಿ ಶಿಸ್ತು ಮತ್ತು ಸಭ್ಯತೆಯ ಗುಣಮಟ್ಟ ಕಡಿಮೆಯಾಗುತ್ತಿರುವ ಬಗ್ಗೆ ಚಿಂತಿತರಾಗಿದ್ದೇವೆ. ಕರ್ನಾಟಕ ವಿಧಾನಸಭೆ ಮತ್ತು ವಿಧಾನಪರಿಷತ್ತು ಸದಸ್ಯರನ್ನು ಉದ್ದೇಶಿಸಿ ನಾನು ಈ ವಿಷಯದ ಬಗ್ಗೆ ಒತ್ತು ನೀಡಿ ನಿನ್ನೆ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದ್ದೇನೆ.

ಸಂಸದೀಯ ವಿಶಿಷ್ಟತೆ ಮತ್ತು ವಿಶ್ವಾಸಾರ್ಹತೆಯನ್ನು ಸುಧಾರಿಸಲು ನಾವು ಪ್ರಯತ್ನಿಸುತ್ತಿದ್ದೇವೆ. ಇದರ ಸಮಗ್ರ ಕ್ರಿಯಾ ಯೋಜನೆಯನ್ನು ರೂಪಿಸುವ ಸಂಬಂಧ ಚರ್ಚಿಸಲು ಶೀಘ್ರದಲ್ಲಿಯೇ ಅಧ್ಯಕ್ಷರುಗಳ ಸಮ್ಮೇಳನವನ್ನು ಸಂಘಟಿಸುತ್ತಿದ್ದು, ಇದರಲ್ಲಿ ಭಾಗವಹಿಸಲು ರಾಷ್ಟ್ರದ ಎಲ್ಲಾ ರಾಜ್ಯಗಳ ಮುಖ್ಯಮಂತ್ರಿಗಳಿಗೆ ಹಾಗೂ ಇತತರಿಗೆ ಆಹ್ವಾನ ನೀಡಲಾಗುವುದು..

ಪ್ರಜಾಪ್ರಭುತ್ವದ ಸಂಸ್ಥೆಗಳನ್ನು ಹೆಚ್ಚು ಕ್ರಿಯಾಶೀಲವನ್ನಾಗಿಸುವುದು ನಮ್ಮ ಉದ್ದೇಶ. ಸದನದ ಕಲಾಪಗಳಲ್ಲಿ ಶಿಸ್ತು ಮತ್ತು ಘನತೆಯಿಂದ ಜನಸಾಮಾನ್ಯರ ಭಾವನೆಗಳಿಗೆ ಅನುಗುಣವಾಗಿ ನಡೆಯಬೇಕು. ಆಗ ಮಾತ್ರ ಸಂಸದೀಯ ಮೌಲ್ಯಗಳು ಹೆಚ್ಚುತ್ತದೆ.

ಇತ್ತೀಚಿನ ದಿನಗಳಲ್ಲಿ ಚುನಾಯಿತ ಪ್ರತಿನಿಧಿಗಳ ಕಾರ್ಯಕ್ಷಮತೆಯನ್ನು ಹೆಚ್ಚಿಸಿದರೆ ಆ ಮೂಲಕ ಪ್ರಜಾಪ್ರಭುತ್ವದ ಸಂಸ್ಥೆಗಳಲ್ಲಿ ಅವರು ಜನರಿಗಾಗಿ ತಮ್ಮ ಬದ್ಧತೆಯನ್ನು ಪೂರೈಸಲು ಸಾಧ್ಯವಾಗುತ್ತದೆ ಎಂಬ ಭಾವನೆ ಹೆಚ್ಚಾಗಿದೆ. ಇದನ್ನು ಗಮನದಲ್ಲಿಟ್ಟುಕೊಂಡು ವಿವಿಧ ಕಾರ್ಯಕ್ರಮಗಳನ್ನು, ಯೋಜನೆಗಳನ್ನು ಹಮ್ಮಿಕೊಳ್ಳಲಾಗುತ್ತಿದೆ.

ಪಾರ್ಲಿಮೆಂಟಿನ ಪ್ರೈಡ್ ಸಂಸ್ಥೆಯ ಮೂಲಕ ಪಂಚಾಯತಿಯಿಂದ ಸಂಸತ್ತಿನ ವರೆಗಿನ ಎಲ್ಲಾ ಸಾರ್ವಜನಿಕ ಪ್ರತಿನಿಧಿಗಳಿಗೆ ಸಾಮರ್ಥ್ಯವನ್ನು ಅಭಿವೃದ್ದಿಪಡಿಸಲು ಕಾರ್ಯಕ್ರಮಗಳನ್ನು ಹಾಕಿಕೊಳ್ಳಲಾಗುತ್ತಿದೆ. ಪ್ರಜಾಸತ್ತಾತ್ಮಕ ಸಂಸ್ಥೆಗಳ ಪ್ರತಿನಿಧಿಗಳಿಗೆ ತರಬೇತಿ ನೀಡಿ ಜಾಗತಿವಾಗಿ ಪ್ರಜಾಪ್ರಭುತ್ವವನ್ನು ಬಲಪಡಿಸಲು ಪ್ರಯತ್ನ ಮಾಡುತ್ತಿದೆ. ಭವಿಷ್ಯದಲ್ಲಿ ನಾವು ಈ ಪ್ರಯತ್ನಗಳನ್ನು ಇನ್ನೂ ಹೆಚ್ಚು ಹೆಚ್ಚು ಹಮ್ಮಿಕೊಳ್ಳುತ್ತೇವೆ ಎಂದು ತಿಳಿಸಿದರು.

ಪಂಚಾಯತ್ ರಾಜ್ ಸಂಸ್ಥೆಗಳ ಸಬಲೀಕರಣಕ್ಕಾಗಿ ಸಂಸತ್ತು ಕೂಡ ಸಂಪೂರ್ಣ ಬದ್ಧತೆಯಿಂದ ಕೆಲಸ ಮಾಡುತ್ತಿದೆ. ಇದಕ್ಕಾಗಿ ಒಂದು ಹೊಸ ಯೋಜನೆಯನ್ನು ಹಾಕಿಕೊಂಡಿದ್ದು, ಪಂಚಾಯತ್ ರಾಜ್ ಪ್ರತಿನಿಧಿಗಳಿಗೆ ವಿಶೇಷ ವಿಸತರಣಾ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಉತ್ತರಖಂಡದ ರಾಜಧಾನಿ ಡೆಹ್ರಾಡೂನ್‌ನಲ್ಲಿ ಈ ವರ್ಷ ಜನವರಿ 8ರಂದು ಇದನ್ನು ಪ್ರಾರಂಭಿಸಲಾಯಿತು. ಅದರ ನಂತರ ಮೇಘಾಲಯ ರಾಜಧಾನಿ ಶಿಲ್ಲಾಂಗ್‌ನಲ್ಲಿ 25ನೇ ಫೆಬ್ರವರಿ ಹಾಗೂ ಆಗಸ್ಟ್ 27 ರಂದು ಲಡಾಖ್ ಮತ್ತು ಆಗಸ್ಟ್ 31ರಲ್ಲಿ ಶ್ರೀನಗರದಲ್ಲಿ ಸಮ್ಮೇಳನ ಏರ್ಪಡಿಸಿದ್ದರು.

ಈ ಸಮ್ಮೇಳನಗಳ ಮೂಲಕ ಪ್ರಜಾಪ್ರಭುತ್ವದ ಚಿಕ್ಕ ಘಟಕಕ್ಕೆ ಸೇರಿದ ಪ್ರತಿನಿಧಿಗಳಿಗೆ ಅಧಿಕಾರ ನೀಡುವುದರ ಮೂಲಕ ದೇಶಾದ್ಯಂತ ಪಂಚಾಯತಿಗಳಲ್ಲಿ ನಡೆಯುತ್ತಿರುವ ನಾವೀನ್ಯತೆಗಳಿಂದ ಕಲಿಯುವ ಅವಕಾಶವನ್ನು ಅವರು ಪಡೆಯುತ್ತಾರೆ ಮತ್ತು ಅವರು ಪರಸ್ಪರ ಅನುಭವಗಳನ್ನು ಹಂಚಿಕೊಳ್ಳುತ್ತಾರೆ. ಇದರೊಂದಿಗೆ ನಾಗರೀಕರ ಮೂಲಭೂತ ಸಮಸ್ಯೆಗಳನ್ನು ನಿರ್ಮೂಲನೆಗೊಳಿಸುವುದರ ಜೊತೆಗೆ ಪಂಚಾಯತಿಗಳು ತಮ್ಮ ಜೀವನದಲ್ಲಿ ಸಾಮಾಜಿಕ – ಆರ್ಥಿಕ ಬದಲಾವಣೆಯ ವೇಗಕ್ಕೆ ಪ್ರಯತ್ನಗಳನ್ನು ಮಾಡಲಾಗುತ್ತಿದೆ.

17ನೇ ಲೋಕಸಭೆಯಲ್ಲಿನ ಕಳೆದ ಆರು ಅಧಿವೇಶನದ ಅವಧಿಗಳಲ್ಲಿ ಇಲ್ಲಿಯವರೆಗೆ ನಡೆದ ಸಮಯದ ಸದ್ಬಳಕೆ ಹಿಂದಿನ ಯಾವುದೇ ಲೋಕಸಭೆಯ ಮೊದಲ ಐದು ದಿನಗಳ ಅವಧಿಗೆ ಹೋಲಿಸಿದರೆ ಅದು ಐತಿಹಾಸಿಕ ದಾಖಲೆಯಾಗಿದೆ. ಮೊದಲ ಆರು ಅಧಿವೇಶನಗಳಲ್ಲಿ ಸರಾಸರಿ ಸಮಯದ ಸದ್ಬಳಕೆ ಶೇಕಡ 102. ನಾಲ್ಕನೇ ಅಧಿವೇಶನದ ಕೆಲಸದ ಉತ್ಪಾದಕತೆ 167 ಪ್ರತಿಶತದಷ್ಟಿದ್ದು, ಇದು ಇದುವರೆಗಿನ ಅತ್ಯಧಿಕ ಕೆಲಸದ ಸದ್ಬಳಕೆಯಾಗಿದೆ.

ಕಳೆದ ನಾಲ್ಕು ಲೋಕಸಭೆಗಳ ಅವಧಿಯಲ್ಲಿ ಮೌಖಿಕ ಪ್ರಶ್ನೆಗಳನ್ನು ಕೇಳಿ ಉತ್ತರಗಳನ್ನು ಪಡೆಯುವ ಪ್ರಮಾಣ ಸರಾಸರಿ ನಾಲ್ಕೂವರೆ ಪ್ರತಿಶತಕ್ಕಿಂತ ಕಡಿಮೆಯಾಗಿತ್ತು. ಇದರ ಸರಾಸರಿ ಪ್ರಮಾಣ 17ನೇ ಲೋಕಸಭೆಯ ಮೊದಲ ಐದು ದಿನಗಳಲ್ಲಿ ಶೇಕಡ 5.37ರಷ್ಟು ಆಗಿದೆ ಎಂದು ತಿಳಿಸಿದರು.

47 ವರ್ಷಗಳ ನಂತರ ಮೊದಲ ಬಾರಿಗೆ 27ನೇ ನವೆಂಬರ್ 2019ರಂದು ಎಲ್ಲಾ 20 ಚುಕ್ಕೆ ರೂಪದ ಪ್ರಶ್ನೆಗಳನ್ನು ಪ್ರಶ್ನೋತ್ತರ ಕಾಲದಲ್ಲಿ ಪ್ರಶ್ನಿಸಲು ಅವಕಾಶ ನೀಡಿದ್ದು, ಇದು ಲೋಕಸಭೆಯ ಕಲಾಪದಲ್ಲಿಯೇ ಗರಿಷ್ಠ ಸಂಖ್ಯೆಯ ಪ್ರಶ್ನೆಗಳನ್ನು ಕೇಳಿದ ದಾಖಲೆಯಾಗಿ ಉಳಿದಿದೆ.

ಸಂಸದೀಯ ಕಾಗದ ಪತ್ರಗಳು ಡಿಜಿಟಲ್ ಮೂಲಕ ಲಭ್ಯವಾಗುವಂತೆ ಮಾಡುವಲ್ಲಿ ಗಮನಾರ್ಹ ಪ್ರಯತ್ನಗಳನ್ನು ಮಾಡಲಾಗುತ್ತಿದೆ. ಪ್ರಶ್ನೆಗಳನ್ನು ಕೇಳಲು ಸಲ್ಲಿಸುವ ನೋಟೀಸುಗಳನ್ನು ಡಿಜಿಟಲೀಕರಣಕ್ಕೆ ತರುವ ಗುರಿಯನ್ನು ಹೊಂದಿದ್ದೇವೆ ಎಂದು ಲೋಕಸಭಾಧ್ಯಕ್ಷರು ತಿಳಿಸದರು.

ಪತ್ರಿಕಾಗೋಷ್ಠಿಯಲ್ಲಿ ರಾಜ್ಯದ ವಿಧಾನಸಭೆಯ ಸಭಾಧ್ಯಕ್ಷರಾದ ವಿಶ್ವೇಶ್ವರ ಹೆಗಡೆ ಕಾಗೇರಿ, ಲೋಕಸಭೆಯ ಕಾರ್ಯದರ್ಶಿ ಉತ್ಪಾಲ್ ಕುಮಾರ್ ಸಿಂಗ್ ಹಾಗೂ ವಿಧಾನ ಸಭೆಯ ಕಾರ್ಯದರ್ಶಿ ಕೆ. ವಿಶಾಲಾಕ್ಷಿ ಅವರು ಉಪಸ್ಥಿತರಿದ್ದರು.

## ಕರ್ನಾಟಕ ಉಚ್ಛ ನ್ಯಾಯಾಲಯದ ನ್ಯಾಯಮೂರ್ತಿಗಳ ಪ್ರಮಾಣ ವಚನ ಸ್ವೀಕಾರ

ಬೆಂಗಳೂರು, ಸೆಪ್ಟೆಂಬರ್ 25, (ಕರ್ನಾಟಕ ವಾರ್ತೆ)

ಕರ್ನಾಟಕ ಉಚ್ಛನ್ಯಾಯಾಲಯದ ಹೆಚ್ಚುವರಿ ನ್ಯಾಯಮೂರ್ತಿಗಳಾದ ಶಿವಶಂಕರ್ ಅಮರಣ್ಣವರ್, ಶ್ರೀಮತಿ ಮಕ್ಕಿಮನೆ ಗಣೇಶಯ್ಯ ಉಮಾ, ವೇದವ್ಯಾಸಚಾರ್ ಶ್ರೀಶಾನಂದ, ಹಂಚಟೆ ಸಂಜೀವಕುಮಾರ್, ಪದ್ಮರಾಜ್ ನೇಮಚಂದ್ರ ದೇಸಾಯಿ, ಪಂಜಿಗಡ್ಡೆ ಕೃಷ್ಣ ಭಟ್, ಮರಳೂರು ಇಂದ್ರಕುಮಾರ್ ಅರುಣ್, ಇಂಗಳಗುಪ್ಪೆ ಸೀತಾರಾಮಯ್ಯ ಇಂದಿರೇಶ್, ರವಿ ವೆಂಕಪ್ಪ ಹೊಸಮನಿ ಮತ್ತು ಸವಣೂರು ವಿಶ್ವಜೀತ್ ಶೆಟ್ಟಿ ಅವರು ಕರ್ನಾಟಕ ಉಚ್ಛನ್ಯಾಯಲಯದ ಗೌರವಾನ್ವಿತ ನ್ಯಾಯಮೂರ್ತಿಗಳಾಗಿ ಇಂದು ರಾಜಭವನದ ಗಾಜಿನ ಮನೆಯಲ್ಲಿ ಪ್ರಮಾಣ ವಚನ ಸ್ವೀಕರಿಸಿದರು. ಗೌರವಾನ್ವಿತ ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್ ವರು ನ್ಯಾಯಮೂರ್ತಿಗಳಿಗೆ ಪ್ರಮಾಣ ವಚನ ಭೋದಿಸಿದರು.

ಸಮಾರಂಭದಲ್ಲಿ ಸನ್ಮಾನ್ಯ ಮುಖ್ಯಮಂತ್ರಿ ಬಸವರಾಜ ಎಸ್ ಬೊಮ್ಮಾಯಿ ಹಾಗೂ ಕರ್ನಾಟಕ ಉಚ್ಚನ್ಯಾಯಾಲಯದ ಗೌರವಾನ್ವಿತ ಹಂಗಾಮಿ ಮುಖ್ಯ ನ್ಯಾಯಮೂರ್ತಿಗಳಾದ ಸತೀಶ್ ಚಂದ್ರ ಶರ್ಮಾ ಹಾಗೂ ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಪಿ.ರವಿಕುಮಾರ್ ಉಪಸ್ಥಿತರಿದ್ದರು.

## ಎಸ್.ಎಸ್.ಎಲ್.ಸಿ ಪೂರಕ ಪರೀಕ್ಷಾ ವಿದ್ಯಾರ್ಥಿಗಳಿಗೆ ಬಸ್‌ನಲ್ಲಿ ವಾಸಸ್ಥಳದಿಂದ ಪರೀಕ್ಷಾ ಕೇಂದ್ರಕ್ಕೆ ಉಚಿತ ಪ್ರಯಾಣಕ್ಕೆ ಅನುಮತಿ

ಬೆಂಗಳೂರು, ಸೆಪ್ಟೆಂಬರ್ 25, (ಕರ್ನಾಟಕ ವಾರ್ತೆ)

ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯು ವಿದ್ಯಾರ್ಥಿ ಸಮುದಾಯದ ಹಿತವನ್ನು ಗಮನದಲ್ಲಿಟ್ಟುಕೊಂಡು ರಿಯಾಯಿತಿ ದರದಲ್ಲಿ ವಿದ್ಯಾರ್ಥಿ ರಿಯಾಯಿತಿ ಪಾಸುಗಳನ್ನು ವಾಸಸ್ಥಳದಿಂದ ಕಾಲೇಜಿಗೆ ಪ್ರಯಾಣಿಸಲು ಅವಕಾಶ ಕಲ್ಪಿಸಿ ವಿತರಣೆ ಮಾಡುತ್ತಿದೆ.

**ಸಂಸ್ಥೆಯು ಎಸ್.ಎಸ್.ಎಲ್.ಸಿ ಪೂರಕ ಪರೀಕ್ಷೆಗೆ ಹಾಜರಾಗುತ್ತಿರುವ ವಿದ್ಯಾರ್ಥಿಗಳ ಹಿತವನ್ನು ಗಮನದಲ್ಲಿಟ್ಟುಕೊಂಡು ದಿನಾಂಕ:27.09.2021 & 29.09.2021 ಪರೀಕ್ಷಾ ದಿನಾಂಕಗಳಂದು ವಾಸಸ್ಥಳದಿಂದ ಪರೀಕ್ಷಾ ಕೇಂದ್ರದವರೆಗೆ ಎಸ್.ಎಸ್.ಎಲ್.ಸಿ ಪರೀಕ್ಷಾ ಪ್ರವೇಶ ಪತ್ರ (ಅಡ್ಮೀಷನ್ ಟಿಕೇಟ್) ಅಥವಾ 2020–21ನೇ ಸಾಲಿನ ವಿದ್ಯಾರ್ಥಿ ಪಾಸನ್ನು ತೋರಿಸಿ ಬೆಂ.ಮ.ಸಾ.ಸಂಸ್ಥೆಯ ಸಾಮಾನ್ಯ ಸೇವೆಗಳಲ್ಲಿ ಉಚಿತವಾಗಿ ಪ್ರಯಾಣಿಸಲು ಅವಕಾಶ ಕಲ್ಪಿಸಲಾಗಿದೆ ಎಂದು ಸಾರ್ವಜನಿಕ ಸಂಪರ್ಕಾಧಿಕಾರಿ ಬಿ.ಎಂ.ಟಿ.ಸಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.**

## Permission for free travel to students attending SSLC supplementary exam

Bangaluru, September 25 (Karnataka Information) :

BMTC for the benefit of student community is issuing student concessional passes to travel from their residence to college at a concessional rate.

In view of the SSLC Supplementary exams conducted on 27.09.2021 and 29.09.2021, BMTC has extended free travel facility to all the students attending SSLC supplementary exams from their residence to the examination center on production of exam Hall/admission ticket or Student pass (Issued in the year 2020-21) said Public Relations Officer BMTC

**ಛಾಯಾಚಿತ್ರ ಶೀರ್ಷಿಕೆ:**

Shri Thaawarchand Gehlot, Hon'ble Governor of Karnataka administered the oath of office to ten new judges in a swearing-in ceremony held at Rajbhavan, Hon'ble Mr. Justice Satish Chandra Sharma, Chief Minister ShribBasavaraj S Bommai, Law Minister Shri J.C.Madhuswamy were present.

The ten new judges who were administered oath of office as High court judges include Hon'ble Shri Justice Maralur Indrakumar Arun, Hon'ble Shri Justice Engalaguppe Seetharamaiah Indiresb, Hon'ble Shri Justice Ravi Venkappa Hosmani, Hon'ble Shri Justice Savanur Vishwajith Shetty, Hon'ble Shri Justice Sbivashankar Amarannavar, Hon'ble Smt. Justice Makkimane Ganeshaiah Uma. Hon'ble Sh ri Justice Vedavyasachar Srishananda, Hon'ble Shri Justice Hanchate Sanjeevkumar, Hon'ble Shri Justice Padmaraj Nemachandra Desai and Hon'ble Shri Justice Panjigadde Krishna Bhat.

ಹೈಕೋರ್ಟ್ ನ 10 ನೂತನ ನ್ಯಾಯಧೀಶರಿಗೆ ಪ್ರಮಾಣ ವಚನ ಬೋಧಿಸಿದ ಘನತೆವೆತ್ತ ರಾಜ್ಯಪಾಲರು

ಬೆಂಗಳೂರು ಸೆಪ್ಟೆಂಬರ್ 25, (ಕರ್ನಾಟಕ ವಾರ್ತೆ): ಕರ್ನಾಟಕ ಉಚ್ಚ ನ್ಯಾಯಾಲಯದ ನ್ಯಾಯಾಧೀಶರಾಗಿ ಇಂದು ಓರ್ವ ಮಹಿಳೆ ಸೇರಿದಂತೆ ಹತ್ತು ಹೊಸ ನ್ಯಾಯಾಧೀಶರು ಪ್ರಮಾಣ ವಚನ ಸ್ವೀಕರಿಸಿದರು. ರಾಜಭವನದಲ್ಲಿ ನಡೆದ ಸಮಾರಂಭದಲ್ಲಿ ಘನತೆವೆತ್ತ ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್ ಅವರು ನೂತನ ನ್ಯಾಯಾಧೀಶರುಗಳಿಗೆ ಪ್ರಮಾಣ ವಚನ ಬೋಧಿಸಿದರು.

ಗೌರವಾನ್ವಿತ ನ್ಯಾಯಾಧೀಶರುಗಳಾದ ಶ್ರೀ ಮರಳೂರು ಇಂದ್ರಕುಮಾರ್ ಅರುಣ್, ನ್ಯಾ. ಎಂಗಲಗುಪ್ಪೆ ಸೀತಾರಾಮಯ್ಯ ಇಂದ್ರೇಶ್ , ನ್ಯಾ.ರವಿ ವೆಂಕಪ್ಪ ಹೊಸಮನಿ, ನ್ಯಾ.ಸವಣೂರು ವಿಶ್ವಜಿತ್ ಶೆಟ್ಟಿ, ನ್ಯಾ.ಶಿವಶಂಕರ್ ಅಮರನ್ನವರ್ , ನ್ಯಾ.ಮಕ್ಕಿಮನೆ ಗಣೇಶಯ್ಯ ಉಮಾ, ವೇದವ್ಯಾಸಚಾರ್ ಶ್ರೀಶಾನಂದ, ನ್ಯಾ.ಹಂಚಟೆ ಸಮಜೀವ್ ಕುಮಾರ್, ನ್ಯಾ.ಪದ್ಮರಾಜ್ ನೇಮಚಂದ್ರ ದೇಸಾಯ್ ಮತ್ತು ನ್ಯಾ.ಪಂಜಿಗಡ್ಡೆ ಕೃಷ್ಣ ಭಟ್ ಅವರುಗಳು ಕರ್ನಾಟಕದ ಉಚ್ಛ ನ್ಯಾಯಾಲಯದ ನ್ಯಾಯಾಧೀಶರುಗಳಾಗಿ ಪ್ರಮಾಣ ವಚನ ಸ್ವೀಕರಿಸಿದರು.

ಸಮಾರಂಭದಲ್ಲಿ ಹೈಕೋರ್ಟ್ ನ ಗೌರವಾನ್ವಿತ ಮುಖ್ಯ ನ್ಯಾಯಾಧೀಶರಾದ ಸತೀಶ್ ಚಂದ್ರ ಶರ್ಮಾ, ಸನ್ಮಾನ್ಯ ಮುಖ್ಯಮಂತ್ರಿ ಬಸವರಾಜ್ ಬೊಮ್ಮಾಯಿ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಜೆ.ಸಿ.ಮಾಧುಸ್ವಾಮಿ ಸೇರಿದಂತೆ ಮುಂತಾದ ಗಣ್ಯರು ಉಪಸ್ಥಿತರಿದ್ದರು.